## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿನಿಯರಿಗೆ ಸ್ವಯಂ ರಕ್ಷಣಾ ಕೌಶಲ್ಯಗಳ ತರಬೇತಿ (ಕರಾಟೆ/ಜುಡೋ/ಟೈಕ್ವಾಂಡೋ) ನೀಡುವ ಬಗ್ಗೆ.

**ಓದಲಾಗಿದೆ:**
1. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಪ್ರಸ್ತಾವನೆ ಸಂಖ್ಯೆ: ಹಿಂವಕಇ/ವನಿಶಾ/ಸಿಆರ್-32/2021-22, ದಿನಾಂಕ:09.09.2021.
2. ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಸುತ್ತೋಲೆ ಸಂಖ್ಯೆ: ಕವಶಿಸಸ/ಶಿಕ್ಷಣ(1) ಸ್ವ.ರ.ಕೌ.ತ/ ಸಿಆರ್33/2021-22, ದಿನಾಂಕ: 28.10.2021

******

**ಪ್ರಸ್ತಾವನೆ:**

ಮೇಲೆ ಓದಲಾದ ಉಲ್ಲೇಖ (1)ರ ಪ್ರಸ್ತಾವನೆಯಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 629 ಮೆಟ್ರಿಕ್-ನಂತರದ ಬಾಲಕಿಯರ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು ಅದರಲ್ಲಿ ಒಟ್ಟಾರೆ 69867 ವಿದ್ಯಾರ್ಥಿನಿಯರಿಗೆ ಪ್ರವೇಶಾವಕಾಶದ ಸೌಲಭ್ಯವನ್ನು ಕಲ್ಪಿಸಲಾಗಿದೆ. ಬಾಲಕಿಯರು ತಮ್ಮನ್ನು ತಾವು ಸ್ವಯಂ ರಕ್ಷಣೆ ಮಾಡಿಕೊಳ್ಳುವ ಹಾಗೂ ದೌರ್ಜನ್ಯ ಮತ್ತು ಶೋಷಣೆಗಳ ವಿರುದ್ಧ ಹೋರಾಡಲು ಆತ್ಮಸ್ಥೈರ್ಯ ತುಂಬುವ ದಿಶೆಯಲ್ಲಿ ವಿದ್ಯಾಭ್ಯಾಸದ ಜೊತೆಗೆ ಕರಾಟೆ ಸ್ವಯಂ ರಕ್ಷಣೆ ತರಬೇತಿಯನ್ನು ನೀಡುವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಪ್ರಸ್ತಾವನೆ ಪಡೆದಿದ್ದು ಅದರಂತೆ 50 ಸಂಖ್ಯಾಬಲದ ವಿದ್ಯಾರ್ಥಿನಿಲಯಕ್ಕೆ ರೂ.68,000/- ಹಾಗೂ 100 ಸಂಖ್ಯಾಬಲದ ವಿದ್ಯಾರ್ಥಿನಿಲಯಕ್ಕೆ ರೂ.1,36,000/- ಗಳ ತರಬೇತಿ ವೆಚ್ಚ ತಗಲುತ್ತದೆ. ತರಬೇತಿ ಸಮಯದಲ್ಲಿ ವಿದ್ಯಾರ್ಥಿನಿಯರಿಗೆ ಸಮವಸ್ತ್ರವನ್ನು ಸಹ ಒದಗಿಸಬೇಕಾಗಿರುತ್ತದೆ ಎಂಬುದಾಗಿ ಹಾಗೂ 2021-22ನೇ ಸಾಲಿನಲ್ಲಿ ವಿದ್ಯಾರ್ಥಿನಿಲಯಗಳ ನಿರ್ವಹಣೆಗಾಗಿ ಹೆಚ್ಚುವರಿ ಅನುದಾನ ಕೋರಿರುತ್ತಾರೆ.

ಮುಂದುವರೆದು ಉಲ್ಲೇಖದ ವಿಷಯದ ಬಗ್ಗೆ ವಿಸ್ತೃತವಾಗಿ ಚರ್ಚಿಸಲು ದಿನಾಂಕ: 06.11.2021ರಂದು ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳ ಸಭೆಯನ್ನು ನಡೆಸಲಾಯಿತು. ಸಭೆಯಲ್ಲಿ ಸವಿಸ್ತಾರವಾಗಿ ಚರ್ಚಿಸಿದಂತೆ, ಈಗಾಗಲೇ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ದಿನಾಂಕ: 28.10.2021ರಂದು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿನ ವಸತಿ ಶಾಲಾ ಕಾಲೇಜುಗಳ 8 ರಿಂದ 10 ಮತ್ತು 11, 12ನೇ ತರಗತಿಯ ವಿದ್ಯಾರ್ಥಿನಿಯರಿಗೆ ಸ್ವಯಂ ರಕ್ಷಣಾ ತರಬೇತಿ (ಕರಾಟೆ/ಜುಡೋ/ಟೈಕ್ವಾಂಡೋ) ಪ್ರಾರಂಭಿಸುವ ಬಗ್ಗೆ ತೆಗೆದುಕೊಂಡಿರುವ ಮಾದರಿಯಲ್ಲಿ ಕ್ರಮ ವಹಿಸಬಹುದಾಗಿ ನಿರ್ಣಯಿಸಲಾಯಿತು.

ಮೇಲಿನ ಎಲ್ಲಾ ವಿಷಯಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ 606 ಬಿಎಂಎಸ್ 2021, ಬೆಂಗಳೂರು, ದಿನಾಂಕ:14-12-2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಮಾತ್ರ ಪ್ರಾಯೋಗಿಕವಾಗಿ ಸ್ವಯಂ ರಕ್ಷಣೆಗಾಗಿ ಕೌಶಲ್ಯ ತರಬೇತಿ (ಕರಾಟೆ/ಜುಡೋ/ಟೈಕ್ವಾಂಡೋ) ಕಾರ್ಯಕ್ರಮವನ್ನು ಜಿಲ್ಲಾ

...2

14/12/21

ವಲಯದಲ್ಲಿ ವಿದ್ಯಾರ್ಥಿನಿಲಯಗಳ ನಿರ್ವಹಣೆ ಲೆಕ್ಕಶೀರ್ಷಿಕೆಯಡಿ ಲಭ್ಯವಿರುವ ಅನುದಾನದಿಂದ ಈ ಕೆಳಕಂಡ ಷರತ್ತುಗಳ ಅನುಸಾರ ಅನುಷ್ಠಾನಗೊಳಿಸಲು ಅನುಮೋದನೆ ನೀಡಿ ಆದೇಶಿಸಿದೆ.

i. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ರವರು ತಮ್ಮ ಜಿಲ್ಲೆಯಲ್ಲಿ ಇರುವ ಎಲ್ಲಾ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿನ ವಿದ್ಯಾರ್ಥಿನಿಯರಿಗೆ ತರಬೇತಿಯ ಅವಕಾಶವನ್ನು ಕಲ್ಪಿಸಲು ನಿಯಮಾನುಸಾರ ಕ್ರಮ ವಹಿಸುವುದು. ಜಿಲ್ಲೆಯಲ್ಲಿ ಕಾರ್ಯಕ್ರಮವನ್ನು ಅನುಷ್ಠಾನ ಮಾಡಲು ರೂಪು ರೇಷೆಗಳನ್ನು ತಯಾರು ಮಾಡಲು ಜಿಲ್ಲಾ ಪಂಚಾಯತ್ ಹಂತದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಯುವ ಸಬಲೀಕರಣ ಅಧಿಕಾರಿ, ಜಿಲ್ಲಾ ಆರೋಗ್ಯ ಅಧಿಕಾರಿ, ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ ಹಾಗೂ ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ (ಸದಸ್ಯ ಕಾರ್ಯದರ್ಶಿ) ಒಳಗೊಂಡ ಸಮಿತಿಯನ್ನು ರಚಿಸುವುದು. ಯೋಜನೆ ಅನುಷ್ಠಾನವನ್ನು ಮೇಲ್ವಿಚಾರಣೆ ಮಾಡುವುದು.

ii. ಮೆಟ್ರಿಕ್ ನಂತರದ ವಿದ್ಯಾರ್ಥಿನಿಯರಿಗೆ ತರಬೇತಿಯನ್ನು ಆಯಾ ಜಿಲ್ಲೆಗಳಲ್ಲಿ ಲಭ್ಯವಿರುವ ಹಾಗೂ ಮಾನ್ಯತೆಯನ್ನು ಪಡೆದಿರುವ ನುರಿತ ಮಹಿಳಾ ತರಬೇತಿದಾರರನ್ನು ಗುರುತಿಸಿ ಅವರ ಮೂಲಕ ತರಬೇತಿಯನ್ನು ಕೊಡಿಸಲು ಕ್ರಮ ವಹಿಸುವುದು.

iii. ಪ್ರತಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯದಲ್ಲಿ ವಾರಕ್ಕೆ ಎರಡು ದಿನ ಬೆಳಗ್ಗೆ(ಒಂದು ತರಬೇತಿ ದಿನಾಂಕದಿಂದ ಮುಂದಿನ ತರಬೇತಿ ದಿನಾಂಕದವರೆಗೆ ಕನಿಷ್ಟ 2 ದಿನಗಳ ಅಂತರವಿರಿಸಿ) ಪ್ರತಿ ಅವಧಿಗೆ 60 ನಿಮಿಷಗಳ ಸಮಯ ನಿಗದಿಪಡಿಸಿ ಒಟ್ಟು ತಿಂಗಳಿಗೆ 8 ತರಬೇತಿ ಅವಧಿಗಳು ತೆಗೆದುಕೊಳ್ಳಲು ನಿಯಮಾನುಸಾರ ಅವಕಾಶ ಮಾಡುವುದು.

iv. ಈ ರೀತಿ ಪ್ರತಿ ಮೆಟ್ರಿಕ್-ನಂತರದ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಒಂದು ವಾರಕ್ಕೆ 2 ದಿನಗಳಲ್ಲಿ 60 ನಿಮಿಷ ಸಮಯ ನಿಗಧಿಪಡಿಸಿ ಒಟ್ಟು 3 ತಿಂಗಳಿಗೆ (ಜನವರಿ 2021 ರಿಂದ ಮಾರ್ಚ್ 2022ನೇ /ಆರ್ಥಿಕ ವರ್ಷದ ಅಂತ್ಯದವರೆಗೆ) 24 ಬೋಧನಾ ಅವಧಿಗಳಲ್ಲಿ ತರಬೇತಿಯನ್ನು ವಿದ್ಯಾರ್ಥಿನಿಲಯಗಳಲ್ಲಿ ಗುರುತಿಸಲ್ಪಟ್ಟ ನುರಿತ ಮಾನ್ಯತೆ ಇರುವ ಮಹಿಳಾ ತರಬೇತುದಾರರ ಮೂಲಕ ಸ್ವಯಂ ರಕ್ಷಣಾ ಕೌಶಲ್ಯ ತರಬೇತಿಯನ್ನು (ಕರಾಟೆ/ಜುಡೋ/ಟೈಕ್ವಾಂಡೋ) ನೀಡಲು ಕ್ರಮವಹಿಸುವುದು.

v. ಸದರಿ ತರಬೇತಿ ಕಾರ್ಯಕ್ರವನ್ನು ಅನುಷ್ಠಾನಗೊಳಿಸುವ ಮುನ್ನ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿನ ಮಹಿಳಾ ನಿಲಯ ಮೇಲ್ವಿಚಾರಕರು ಮತ್ತು ಎಲ್ಲಾ ತರಬೇತಿದಾರರನ್ನು ಒಳಗೊಂಡಂತೆ ತರಬೇತಿಯ ಉದ್ದೇಶ, ಅವಧಿ ವೇಳಾಪಟ್ಟಿ, ತರಬೇತಿಯ ಪೂರ್ವಸಿದ್ಧತೆ ಕುರಿತು ಸೂಕ್ತ ಸಮಾಲೋಚಿಸಲು ಜಿಲ್ಲಾ ಹಂತದಲ್ಲಿ ಕಾರ್ಯಗಾರವನ್ನು ಏರ್ಪಡಿಸುವುದು.

vi. ತರಬೇತಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ಮುನ್ನ ಜಿಲ್ಲಾ ಆರೋಗ್ಯ ಅಧಿಕಾರಿಗಳಿಂದ ನಿಯೋಜಿಸಲಾಗಿರುವ ವೈದ್ಯರ ತಂಡದ ಮೂಲಕ ಸದರಿ ವಿದ್ಯಾರ್ಥಿನಿಲಯಗಳಲ್ಲಿನ ವಿದ್ಯಾರ್ಥಿನಿಯರ ವೈದ್ಯಕೀಯ ಪರೀಕ್ಷೆಯನ್ನು ನಡೆಸಿ ಆರೋಗ್ಯವಂತ ವಿದ್ಯಾರ್ಥಿನಿಯರಿಗೆ ಮಾತ್ರ ತರಬೇತಿ ಹಮ್ಮಿಕೊಳ್ಳಲು ಕ್ರಮವಹಿಸುವುದು.

vii. ಸದರಿ ವಿದ್ಯಾರ್ಥಿನಿಲಯಗಳಲ್ಲಿ ತರಬೇತಿಗೆ ನಿಗಧಿಯಾದ ವೇಳಾಪಟ್ಟಿಯನ್ನು ಕಡ್ಡಾಯವಾಗಿ ಹಾಗೂ ತರಬೇತಿದಾರರ ಹಾಜರಾತಿಯ ಹಾಗೂ ಅವರಿಗೆ ನೀಡುವ ಗೌರವ ಧನ ಹಾಗೂ ಪ್ರಯಾಣ ವೆಚ್ಚದ ವಿವರಗಳನ್ನು ನೋಟಿಸ್ ಬೋರ್ಡ್‌ನಲ್ಲಿ ಹಾಕಲು ಸೂಚಿಸುವುದು.

viii. ತರಬೇತಿ ನೀಡುವ ಸಂದರ್ಭದಲ್ಲಿ ಕಡ್ಡಾಯವಾಗಿ ವಿದ್ಯಾರ್ಥಿನಿಲಯಗಳ ಮೇಲ್ವಿಚಾರಕರು ವಿದ್ಯಾರ್ಥಿನಿಲಯಗಳಲ್ಲಿ ಹಾಜರಿರತಕ್ಕದ್ದು.



14/12/21